ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಸವನಗೌಡ ಬಾದರ್ಲಿ ಇವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:208ಕ್ಕೆ ಉತ್ತರ:

*******

:ಸೂಚನೆ:

ಪ್ರೊ: ನಂಜುಡಪ್ಪರವರ ವರದಿಯಂತೆ ಸಿಂಧನೂರು ತಾಲ್ಲೂಕು ಆರ್ಥಿಕವಾಗಿ ಹಿಂದುಳಿದ ತಾಲ್ಲೂಕಾಗಿದ್ದು, ಈ ಭಾಗದಲ್ಲಿ ಹೆಚ್ಚಿನ ಸಂಖ್ಯೆಯ ವಿದ್ಯಾವಂತ ಯುವಕ/ಯುವತಿಯರು ನಿರುದ್ಯೋಗದ ಸಮಸ್ಯೆಯನ್ನು ಎದುರಿಸುತ್ತಿರುವ ಹಿನ್ನೆಲೆಯಲ್ಲಿ ಉದ್ಯೋಗವನ್ನು ಸೃಷ್ಟಿಸುವ ಕಾರಣದಿಂದಾಗಿ ಬೃಹತ್ & ಮಧ್ಯಮ ಕೈಗಾರಿಕೆಗಳನ್ನು ಆಕರ್ಷಿಸಲು ಅನುವಾಗುವಂತೆ ಸಿಂಧನೂರು ತಾಲ್ಲೂಕಿನಲ್ಲಿ ಕೆಐಎಡಿಬಿ ಯಿಂದ ಕೈಗಾರಿಕಾ ಪ್ರದೇಶವನ್ನು ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ ಅಭಿವೃದ್ಧಿಪಡಿಸುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನಕ್ಕೆ ತರಬಯಸುತ್ತೇನೆ.

:ಹೇಳಿಕೆ:

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನಲ್ಲಿ ಯಾವುದೇ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಿರುವುದಿಲ್ಲ.

ಸಿಂಧನೂರು ತಾಲೂಕಿನಲ್ಲಿ ಕೈಗಾರಿಕೆಗಳಿಂದ ಬೇಡಿಕೆ ಬಂದಲ್ಲಿ ಸಂಬಂಧ ಪಟ್ಟ ಜಿಲ್ಲಾ ಕೈಗಾರಿಕಾ ಕೇಂದ್ರ ಮತ್ತು ಕೆ.ಐ.ಎ.ಡಿ.ಬಿ ಅಧಿಕಾರಿಗಳಿಂದ ಸಮೀಕ್ಷೆ ನಡೆಸಿ ವರದಿ ಪಡೆದು, ಬೇಡಿಕೆ ಅನುಸಾರ ಭೂಸ್ವಾಧೀನ ಪಡಿಸಿಕೊಂಡು ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿ ಪಡಿಸಲಾಗುತ್ತದೆ.

**ಸಂಖ್ಯೆ: ಸಿಐ 270 ಐಎಪಿ 2026**

**( ಎಂ.ಬಿ. ಪಾಟೀಲ)**
ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು